ಕರ್ನಾಟಕ ಸರ್ಕಾರ

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು–03

ಸಂಖ್ಯೆ:ಎಸ್1/ವಾ.ಪ ಏಪ್ರಿಲ್–2021/38/2020–21 ದಿನಾಂಕ:12.03.2021

ಜ್ಞಾಪನ

ವಿಷಯ: ಏಪ್ರಿಲ್–2021 ರ ಮಾಹೆಯಲ್ಲಿ ನಡೆಯಲಿರುವ ವಾಣಿಜ್ಯ ಪರೀಕ್ಷೆಗೆ ಹಾಜರಾಗುತ್ತಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ದಂಡ ರಹಿತವಾಗಿ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ ಬಗ್ಗೆ.

ಉಲ್ಲೇಖ: ಮಂಡಳಿಯ ಅಧಿಸೂಚನೆ ಸಂಖ್ಯೆಎಸ್1/ವಾ.ಪ/ಏಪ್ರಿಲ್–2021/38/2020–21 ದಿನಾಂಕ:22.02.2021

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಏಪ್ರಿಲ್–2021 ರ ಮಾಹೆಯಲ್ಲಿ ನಡೆಯುವ ವಾಣಿಜ್ಯ ಪರೀಕ್ಷೆಗೆ ಉಲ್ಲೇಖಿತ ಪತ್ರದ ಅಧಿಸೂಚನೆಯಂತೆ ರಾಜ್ಯದ ಎಲ್ಲಾ ವಾಣಿಜ್ಯ ಸಂಸ್ಥೆಗಳ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಂಡರಹಿತವಾಗಿ ದಿನಾಂಕ:12.03.2021 ನಿಗಧಿಪಡಿಸಲಾಗಿದ್ದು, ವಾಣಿಜ್ಯ ಸಂಸ್ಥೆಗಳ ಮನವಿಯ ಮೇರೆಗೆ ದಂಡ ರಹಿತವಾಗಿ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಈ ಕೆಳಕಂಡಂತೆ ದಿನಾಂಕ ವಿಸ್ತರಿಸಲಾಗಿದೆ. **ಮತ್ತೊಮ್ಮೆ ಯಾವುದೇ ಕಾರಣಕ್ಕೂ ಕಾಲಾವಧಿ ವಿಸ್ತರಿಸುವುದಿಲ್ಲವೆಂದು ಈ ಮೂಲಕ ತಿಳಿಸಿದೆ**

ಕ್ರ.ಸಂ	ವಿವರ	ಈಗಾಗಲೇ ನಿಗಧಿಪಡಿಸಿದ್ದ ದಿನಾಂಕ	ವಿಸ್ತರಣೆ ಮಾಡಿದ ಕೊನೆಯ ದಿನಾಂಕ
01	ವಾಣಿಜ್ಯ ಸಂಸ್ಥೆಗಳ ಅಭ್ಯರ್ಥಿಗಳು ಆನ್‌ಲೈನ್ ನಲ್ಲಿ **ದಂಡ ರಹಿತವಾಗಿ** ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ	12.03.2021	15.03.2021
02	ವಾಣಿಜ್ಯ ಸಂಸ್ಥೆಗಳ ಅಭ್ಯರ್ಥಿಗಳು ಆನ್‌ಲೈನ್ ನಲ್ಲಿ **ದಂಡ ಸಹಿತವಾಗಿ** ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ	16.03.2021	18.03.2021

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳವರೆಗೆ ವಿದ್ಯಾರ್ಥಿಗಳಿಂದ ಶುಲ್ಕ ಸ್ವೀಕರಿಸಿ ಆನ್ ಲೈನ್ ಮೂಲಕ ನೋಂದಣಿ ಮಾಡಿಕೊಳ್ಳಬೇಕಾಗಿರುತ್ತದೆ. ಈ ಕುರಿತು ವಾಣಿಜ್ಯ ಸಂಸ್ಥೆಗಳ ಮುಖ್ಯಸ್ಥರು ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ತಂದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಈ ಮೂಲಕ ತಿಳಿಸಿದೆ.

ನಿರ್ದೇಶಕರು 12/3/2021
(ಇತರೆ ಪರೀಕ್ಷೆಗಳು)

ಇವರಿಗೆ:

1. ರಾಜ್ಯದ ಎಲ್ಲಾ ವಾಣಿಜ್ಯ ಸಂಸ್ಥೆಗಳ ಮುಖ್ಯಸ್ಥರಿಗೆ ಮಾಹಿತಿಗಾಗಿ,